# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ. | 2549 |
| ಮಾನ್ಯ ಸದಸ್ಯರ ಹೆಸರು | ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.03.2022 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕದಲ್ಲಿ ಮದ್ಯದಂಗಡಿಗಳ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು; 1968ರ ನಿಯಮ 12 ರೀತ್ಯಾ ಜನಸಂಖ್ಯೆ ಆಧಾರದ ಮೇಲೆ ಪ್ರತಿ ವರ್ಷ ಸಿಎಲ್–2 ಕೋಟಾವನ್ನು ಪರಿಷ್ಕರಿಸಿ ನಿಗದಿಪಡಿಸಬೇಕಾಗಿರುತ್ತದೆ. ಪ್ರಸ್ತುತ ಸಿಎಲ್–2 ಸನ್ನದಿನ ಹೊಸ ಮಂಜೂರಾತಿಗೆ ನಿರ್ಬಂಧ ಇರುವುದರಿಂದ ಹಾಲಿ ಇರುವ ಜನಸಂಖ್ಯೆ ಆಧಾರದ ಮೇಲೆ ಕೋಟಾ ನಿಗದಿಪಡಿಸಲಾಗುತ್ತಿಲ್ಲ. 1987ರಲ್ಲಿನ ಸಿಎಲ್–2 ಕೋಟಾವನ್ನೇ ಪಾಲಿಸಲಾಗುತ್ತಿದೆ.<br><br>ಹೊಸ ಸಿಎಲ್–2 ಸನ್ನದುಗಳ ಮಂಜೂರಾತಿಗೆ ನಿರ್ಬಂಧವಿರುವುದರಿಂದ ಸರ್ಕಾರವು ಒಟ್ಟು 1363 ಸಿಎಲ್ 11–ಸಿ ಸನ್ನದುಗಳನ್ನು ಸರ್ಕಾರಿ ಸ್ವಾಮ್ಯದ ಎಂ.ಎಸ್.ಐ.ಎಲ್ ಸಂಸ್ಥೆಯವರಿಗೆ ಮಂಜೂರು ಮಾಡಲು ಅನುಮತಿ ನೀಡಿದ್ದು, ಒಟ್ಟು 1049 ಸನ್ನದುಗಳನ್ನು ತೆರೆಯಲು ಪೂರ್ವಾನುಮತಿ ನೀಡಲಾಗಿರುತ್ತದೆ. ಇಷ್ಟು ಸನ್ನದುಗಳಿಗೆ ಮಂಜೂರಾತಿ ನೀಡಿದರೂ ಸಹ ಜನಸಂಖ್ಯೆಗೆ ಅನುಗುಣವಾಗಿ |

| | | |
|---|---|---|
| | | ಇರಬೇಕಾಗಿದ್ದ ಮದ್ಯದಂಗಡಿಗಳ ಸಂಖ್ಯೆಯನ್ನು ಮೀರದೇ ಇರುವುದರಿಂದ, ಕಡಿಮೆ ಮಾಡುವ ಪ್ರಶ್ನೆ ಉದ್ಭವಿಸವುದಿಲ್ಲ. |
| ಆ) | ಮದ್ಯಪಾನದಿಂದ ಆರೋಗ್ಯದ ಮೇಲೆ ದುಷ್ಪರಿಣಾಮವಾಗುವುದಲ್ಲದೆ, ಸಂಸಾರಗಳು ಹಾಳಾಗುವುದರಿಂದ ಹಂತ ಹಂತವಾಗಿ ಮದ್ಯಪಾನ ನಿಷೇಧಿಸಲು ಸರ್ಕಾರ ಆಲೋಚಿಸುತ್ತದೆಯೇ; | ಮದ್ಯಪಾನ ನಿಷೇಧದ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಇ) | ಗ್ರಾಮೀಣ ಪ್ರದೇಶಗಳಲ್ಲೂ ಮದ್ಯ ಮಾರಾಟ ಅವ್ಯಾಹತವಾಗಿ ನಡೆಯುತ್ತಿರುವುದರಿಂದ ಮಕ್ಕಳೂ ಸೇರಿದಂತೆ ಸಾರ್ವಜನಿಕರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಅಕ್ರಮ ಮದ್ಯದ ದುಷ್ಪರಿಣಾಮಗಳ ಕುರಿತು ಕ್ಷೇತ್ರ ಸಿಬ್ಬಂದಿಯವರಿಂದ ಗ್ರಾಮಾಂತರ ಹಾಗೂ ನಗರ ಪ್ರದೇಶಗಳಲ್ಲಿ ಜನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶೈಕ್ಷಣಿಕ ಸಂಸ್ಥೆಗಳು ಹಾಗೂ ವೃತ್ತಿಪರ ಕಾಲೇಜುಗಳಲ್ಲಿ ಡ್ರಗ್ಸ್ ಹಾಗೂ ಮದ್ಯಪಾನದಿಂದ ಆಗುವ ಅನಾಹುತಗಳ ಬಗ್ಗೆ ಕಮ್ಮಟಗಳನ್ನು ಏರ್ಪಡಿಸಿ ಜಾಗೃತಿ ಮೂಡಿಸಲಾಗುತ್ತಿದೆ. ಗ್ರಾಮ ಸಭೆಗಳಲ್ಲಿ ಮದ್ಯ ಸಂಬಂಧಿ ವಿಷಯಗಳ ಬಗ್ಗೆ ಚರ್ಚಿಸಲಾಗುತ್ತಿದೆ. ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಕಾನೂನು ಅರಿವು ಕಾರ್ಯಕ್ರಮಗಳಲ್ಲಿ ಮದ್ಯ ಹಾಗೂ ಡ್ರಗ್ಸ್‌ನಿಂದಾಗುವ ದುಷ್ಪರಿಣಾಮಗಳೊಂದಿಗೆ ಕಾನೂನಿನ ತಿಳುವಳಿಕೆಯನ್ನು ನೀಡಲಾಗುತ್ತಿದೆ. ಅಲ್ಲದೇ ಮದ್ಯದ ಬಾಟಲುಗಳಲ್ಲಿನ ಲೇಬಲ್‌ಗಳ ಮೇಲೆ ಕಡ್ಡಾಯವಾಗಿ ಮದ್ಯಪಾನ ಸೇವನೆಯಿಂದ ಆರೋಗ್ಯಕ್ಕೆ ಹಾನಿಕರ ಎಂಬ ಶೀರ್ಷಿಕೆಯನ್ನು ಮುದ್ರಿಸಲಾಗುತ್ತಿದೆ. |

**ಆಇ 61 ಇಎಲ್‌ಕ್ಯೂ 2022**

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು.